**ಕರ್ನಾಟಕ ಸರಕಾರ**

ಸಂ:ಬಿಜಿಎಂ:ಡಿಯುಡಿಸಿ:ಯುಪಿಎಸಿ:ಸಿಆರ್:1:2012-13

ಜಿಲ್ಲಾಧಿಕಾರಿಗಳ ಕಾರ್ಯಾಲಯ,
ನಗರ ಬಡತನ ನಿರ್ಮೂಲನಾ ಕೋಶ,
ಬೆಳಗಾವಿ. ದಿನಾಂಕ:30.05.2012.

**ವಿಷಯ:** ಪಟ್ಟಣ ಪಂಚಾಯತ ರಾಯಬಾಗ ವ್ಯಾಪ್ತಿಯಲ್ಲಿ 2012-13ನೇ ಸಾಲಿನ ಪಟ್ಟಣ ಪಂಚಾಯತ ಆದಾಯದಡಿ ಶೇ.7.25 ಮತ್ತು ಶೇ.3ರಡಿ ತೆಗೆದುಕೊಂಡ ಕಾರ್ಯಕ್ರಮ/ಕಾಮಗಾರಿಗಳ ಕ್ರಿಯಾ ಯೋಜನೆ ಅನುಮೋದನೆ ಕುರಿತು.

**ಓದಿತು:**-1)ಸರ್ಕಾರದ ಸುತ್ತೋಲೆ ಸಂಖ್ಯೆ: ನಅಇ:415:ಜಿಇಎಲ್:2011 ದಿನಾಂಕ:27.02.2012

2)ಆಯುಕ್ತರು, ಪೌರಾಡಳಿತ ನಿರ್ದೇಶನಾಲಯ ಬೆಂಗಳೂರು ಸುತ್ತೋಲೆಸಂ:ಪೌನಿ:22.75:ಸುತ್ತೋಲೆ:2:2012-13 ದಿನಾಂಕ:24.04.2012

3)ಮುಖ್ಯಾಧಿಕಾರಿ, ಪಟ್ಟಣ ಪಂಚಾಯತ ರಾಯಬಾಗ ಇವರ ಪತ್ರ ಸಂಖ್ಯೆ: ಪಪಂರಾ: ಸಾಮಾನ್ಯ ನಿಧಿ:7.25, 3%:2012-13:36:38 ದಿನಾಂಕ:08.05.2012

**ಪ್ರಸ್ತಾವನೆ:**

2012-13ನೇ ಸಾಲಿಗೆ ರಾಯಬಾಗ ಪಟ್ಟಣ ಪಂಚಾಯತಿಯು ಸರ್ಕಾರದ ಸುತ್ತೋಲೆಯ ಮಾರ್ಗಸೂಚಿಗಳನ್ವಯ ಬಾಬ್ತುಗಳನ್ನು ಹೊರತುಪಡಿಸಿ ರೂ. 32,63,000/-ಗಳ ಆದಾಯವನ್ನು ಹೊಂದಿರುತ್ತದೆ. ಅದರಂತೆ ಓದಿತು (3)ರನ್ವಯ ಮುಖ್ಯಾಧಿಕಾರಿ, ಪಟ್ಟಣ ಪಂಚಾಯತ ರಾಯಬಾಗ ಇವರು ಪಟ್ಟಣ ಪಂಚಾಯತ ಆದಾಯದಲ್ಲಿ ಶೇ.7.25ರಷ್ಟು ನಗರದ ಇತರೆ ಬಡ ಜನರ ಕಲ್ಯಾಣ ಕಾರ್ಯಕ್ರಮಗಳಿಗೆ ರೂ.2,36,000/-ಗಳಲ್ಲಿ 05 ಕಾರ್ಯಕ್ರಮಗಳಿಗೆ ಹಾಗೂ ಶೇ.3%ರಷ್ಟು ವಿಕಲಚೇತನರ ಕಲ್ಯಾಣ ಕಾರ್ಯಕ್ರಮಗಳಿಗಾಗಿ ರೂ.98,000/-ಗಳಲ್ಲಿ 03 ಕಾರ್ಯಕ್ರಮಗಳ ಕ್ರಿಯಾ ಯೋಜನೆ ಅನುಮೋದನೆಗಾಗಿ ಸಲ್ಲಿಸಿರುತ್ತಾರೆ. ಅದರಂತೆ ಓದಿತು (1)ರ ಸರ್ಕಾರದ ಸುತ್ತೋಲೆ ಮಾರ್ಗಸೂಚಿಯಂತೆ ಪರಿಶೀಲಿಸಲಾಗಿ, ಶೇ.7.25ರಷ್ಟು ನಗರದ ಇತರೆ ಬಡಜನರ ಕಲ್ಯಾಣ ನಿಧಿಗೆ ರೂ.2,36,000/-ಗಳಲ್ಲಿ 05 ಕಾರ್ಯಕ್ರಮಗಳಿಗೆ ಹಾಗೂ ಶೇ.3ರಷ್ಟು ವಿಕಲಚೇತನರ ಕಲ್ಯಾಣ ಕಾರ್ಯಕ್ರಮಗಳಿಗಾಗಿ ರೂ.98,000/-ಗಳಲ್ಲಿ 03 ಕಾರ್ಯಕ್ರಮಗಳ ಕ್ರಿಯಾ ಯೋಜನೆ ಅನುಮೋದನೆಗೆ ಪ್ರಸ್ತಾಪಿಸಿದ್ದನ್ನು ಪರಿಗಣಿಸಲಾಗಿದೆ.

| **ಕ್ರ.ಸಂ** | **ಕಾರ್ಯಕ್ರಮಗಳ ಹೆಸರು** | **ಅಂದಾಜು ಮೊತ್ತ (ರೂ. ಗಳಲ್ಲಿ)** |
|---|---|---|
| *1* | *2* | *3* |
| | **ಶೇ.7.25ರ ಇತರೆ ಬಡಜನರ ಕಲ್ಯಾಣ ಕಾರ್ಯಕ್ರಮ/ಕಾಮಗಾರಿಗಳು** | |
| | **ವ್ಯಕ್ತಿ ಸಂಬಧಿತ ಅನುಕೂಲತೆಗಳು** | |
| | **ವಸತಿ** | |
| 1 | ಪಟ್ಟಣ ಪಂಚಾಯತ ವ್ಯಾಪ್ತಿಯಲ್ಲಿ ಬರುವ ಬಡಜನರಿಗೆ ಪಕ್ಕಾ ಮನೆ ನಿರ್ಮಾಣಕ್ಕೆ ಸಹಾಯಧನ ನೀಡುವುದು. | 70,000.00 |

| | | |
|---|---|---|
| 2 | ಪಟ್ಟಣ ಪಂಚಾಯತ ವ್ಯಾಪ್ತಿಯಲ್ಲಿ ಬರುವ ಬಡಜನರಿಗೆ ಶಸ್ತ್ರ ಚಿಕಿತ್ಸೆಗೆ ಸಹಾಯಧನ ನೀಡುವುದು. | 60,400.00 |
| | **ಶಿಕ್ಷಣ** | |
| 3 | ಎಸ್.ಎಸ್.ಎಲ್.ಸಿ ವಿದ್ಯಾರ್ಥಿ/ವಿದ್ಯಾರ್ಥಿನಿಯರಿಗೆ ವಿಶೇಷ ಆರ್ಥಿಕ ನೆರವು ನೀಡುವುದು. | 14,000.00 |
| | **ಸಮುದಾಯ ಸೌಲಭ್ಯಗಳು** | |
| | **ಶಿಕ್ಷಣ** | |
| 4 | ವಿವೇಕ ನಗರದ ಹಿಂದುಳಿದ ಮತ್ತು ಅಲ್ಪಸಂಖ್ಯಾತರ ವಸತಿ ನಿಲಯಕ್ಕೆ ಹಾಸಿಗೆ, ಪೀಠೋಪಕರಣ ಒದಗಿಸುವುದು. | 50,000.00 |
| | **ಮೂಲಸೌಕರ್ಯ** | |
| 5 | ಪಟ್ಟಣ ಪಂಚಾಯತ ವ್ಯಾಪ್ತಿಯಲ್ಲಿ ಬರುವ ಅಂಬಾಬಾಯಿ ಗುಡಿಯ ಹತ್ತಿರ ಇರುವ ಶೌಚಾಲಯ ರಿಪೇರಿ ಮಾಡುವುದು. | 41,600.00 |
| | **ಒಟ್ಟು** | **2,36,000.00** |
| | **ಶೇ.3ರ ವಿಕಲಚೇತನರ ಕಲ್ಯಾಣ ಕಾರ್ಯಕ್ರಮಗಳು** | |
| | **ವ್ಯಕ್ತಿ ಸಂಬಧಿತ ಅನುಕೂಲತೆಗಳು** | |
| | **ಶಿಕ್ಷಣ** | |
| 1 | ಎಸ್.ಎಸ್.ಎಲ್.ಸಿ ಓದುತ್ತಿರುವ ವಿದ್ಯಾರ್ಥಿ/ವಿದ್ಯಾರ್ಥಿನಿಯರಿಗೆ ವಿಶೇಷ ಆರ್ಥಿಕ ನೆರವು ನೀಡುವುದು. | 10,000.00 |
| | **ಆರೋಗ್ಯ** | |
| 2 | ಶಸ್ತ್ರ ಚಿಕಿತ್ಸೆಗೆ ಧನಸಹಾಯ ನೀಡುವುದು. | 73,000.00 |
| | **ಸಮುದಾಯ ಸೌಲಭ್ಯಗಳು** | |
| | **ಶಿಕ್ಷಣ** | |
| 3 | ಅಂಗವಿಕಲರ ಅಭಿವೃದ್ಧಿಗಾಗಿ ಶ್ರಮಿಸುವ ಸಂಸ್ಥೆಗೆ ಸಹಾಯಧನ ನೀಡುವುದು. | 15,000.00 |
| | **ಒಟ್ಟು** | **98,000.00** |

**ಆದೇಶ**

ಮೇಲಿನ ಪ್ರಸ್ತಾವನೆಯಂತೆ ಪಟ್ಟಣ ಪಂಚಾಯತ ರಾಯಬಾಗ ವ್ಯಾಪ್ತಿಯಲ್ಲಿ 2012-13ನೇ ಸಾಲಿನ ಪಟ್ಟಣ ಪಂಚಾಯತ ಆದಾಯದಡಿ ಶೇ.7.25ರಷ್ಟು ನಗರದ ಇತರೆ ಬಡ ಜನರ ಕಲ್ಯಾಣ ಯೋಜನೆಯಡಿ ರೂ.2,36,000/-ಗಳಲ್ಲಿ 05 ಕಾರ್ಯಕ್ರಮಗಳಿಗೆ ಹಾಗೂ ಶೇ.3%ರಷ್ಟು ವಿಕಲಚೇತನರ ಕಲ್ಯಾಣ ಯೋಜನೆಯಡಿ ರೂ.98,000/-ಗಳಲ್ಲಿ 03 ಕಾರ್ಯಕ್ರಮಗಳನ್ನು ಕೈಕೊಳ್ಳಲು ಕ್ರಿಯಾಯೋಜನೆ ಅನುಮೋದನೆ ನೀಡಿ ಓದಿತು (1) ಹಾಗೂ (2)ರ ಸರ್ಕಾರದ ಸುತ್ತೋಲೆಯ ನಿಬಂಧನೆ ಹಾಗೂ ಷರತ್ತುಗಳಿಗೆ ಅನುಗುಣವಾಗಿ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಲು ಆದೇಶಿಸಿದೆ.

**ಸಹಿ/-**
**(ವಿ. ಅನ್ಬುಕುಮಾರ)**
ಜಿಲ್ಲಾಧಿಕಾರಿಗಳು, ಬೆಳಗಾವಿ

**ಪ್ರತಿ:**ಗೌರವಾದರಗಳೊಂದಿಗೆ, ಆಯುಕ್ತರು ಪೌರಾಡಳಿತ ನಿರ್ದೇಶನಾಲಯ, ಬೆಂಗಳೂರು ಇವರಿಗೆ ಮಾಹಿತಿಗಾಗಿ ಸಾದರಪಡಿಸಿದೆ.

**ಪ್ರತಿ:**ಕಾರ್ಯಪಾಲಕ ಅಭಿಯಂತರರು/ ಸಹಾಯಕ ಕಾರ್ಯಪಾಲಕ ಅಭಿಯಂತರರು ಜಿಲ್ಲಾ ನಗರಾಭಿವೃದ್ಧಿ ಕೋಶ, ಜಿಲ್ಲಾಧಿಕಾರಿಗಳ ಕಾರ್ಯಾಲಯ ಬೆಳಗಾವಿ.

**ಪ್ರತಿ:**ಮುಖ್ಯಾಧಿಕಾರಿಗಳು, ಪಟ್ಟಣ ಪಂಚಾಯತ ರಾಯಬಾಗ ಇವರಿಗೆ ಸೂಕ್ತ ಕ್ರಮಕ್ಕಾಗಿ ಕಳುಹಿಸಿದೆ.

**ಸಹಿ/-**

ಯೋಜನಾ ನಿರ್ದೇಶಕರು
ಜಿಲ್ಲಾ ನಗರಾಭಿವೃದ್ಧಿ ಕೋಶ,
ಜಿಲ್ಲಾಧಿಕಾರಿಗಳ ಕಾರ್ಯಾಲಯ ಬೆಳಗಾವಿ